# All India Radio: Bangalore
# National Bulletin In Kannada
# 05.03.2025 13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.03.2025 13.10 p.m.**

**************

ಮುಖ್ಯಾಂಶಗಳು

1. ನವದೆಹಲಿಯಲ್ಲಿ ಇಂದು ರಾಷ್ಟ್ರೀಯ ಸಮಾವೇಶ; ಪಂಚಾಯತಿ ರಾಜ್ ಸಚಿವಾಲಯದಿಂದ 'ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್' ಗೆ ಚಾಲನೆ
2. ಪ್ರಧಾನಿ ನರೇಂದ್ರ ಮೋದಿ ನಾಳೆ ಉತ್ತರಾಖಂಡ್‌ಗೆ ಭೇಟಿ; ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ
3. 2024-25ನೇ ಹಣಕಾಸು ವರ್ಷದಲ್ಲಿ ಒಟ್ಟು ಕಲ್ಲಿದ್ದಲು ಉತ್ಪಾದನೆಯ ಪ್ರಮಾಣ ಈ ಫೆಬ್ರವರಿ ವೇಳೆಗೆ ಶೇಕಡ 37 ರಷ್ಟು ಹೆಚ್ಚಳ
4. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್; 2ನೇ ಸೆಮಿಫೈನಲ್ ಪಂದ್ಯದಲ್ಲಿ ಇಂದು ನ್ಯೂಜಿಲೆಂಡ್- ದಕ್ಷಿಣ ಆಫ್ರಿಕಾ ಮುಖಾಮುಖಿ

**************

ಪಂಚಾಯತಿ ರಾಜ್ ಖಾತೆ ರಾಜ್ಯ ಸಚಿವ ಪ್ರೊಫೆಸರ್ ಎಸ್. ಪಿ. ಸಿಂಗ್ ಬಘೇಲ್ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಇಂದು ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಸಮಾವೇಶದಲ್ಲಿ ಪಂಚಾಯತಿ ರಾಜ್ ಸಚಿವಾಲಯದ ಮಾದರಿ ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್ ಉಪಕ್ರಮಕ್ಕೆ ಚಾಲನೆ ನೀಡಿದರು.

ಈ ಉಪಕ್ರಮವು ಸಚಿವಾಲಯದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ 2025 ರ ಭಾಗವಾಗಿದೆ. ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಮಾದರಿ ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್ ಅನ್ನು ಸ್ಥಾಪಿಸುವುದು ಈ ಉಪಕ್ರಮದ ಪ್ರಾಥಮಿಕ ಉದ್ದೇಶವಾಗಿದೆ.

ಇದು ಮಹಿಳಾ ಸ್ನೇಹಿ ಆಡಳಿತ ಪದ್ಧತಿಗಳಿಗೆ ದಾರಿದೀಪವಾಗಿ ಕಾರ್ಯನಿರ್ವಹಿಸುತ್ತದೆ. ವಿವಿಧ ಸಚಿವಾಲಯಗಳು, ಇಲಾಖೆಗಳು ಮತ್ತು ವಿಶ್ವಸಂಸ್ಥೆಯ ಜನಸಂಖ್ಯಾ ನಿಧಿಯಂತಹ ಅಂತಾರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ.

**************

ಪ್ರಧಾನಿ ನರೇಂದ್ರ ಮೋದಿ ನಾಳೆ ಉತ್ತರಾಖಂಡಕ್ಕೆ ಭೇಟಿ ನೀಡಲಿದ್ದಾರೆ. ಮುಖ್ವಾದಲ್ಲಿರುವ ಮಾ ಗಂಗೆಯಲ್ಲಿ ಪೂಜೆ ಸಲ್ಲಿಸಿ ದರ್ಶನ ಪಡೆಯಲಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಧಾನಿ ಪಾದಯಾತ್ರೆ ಮತ್ತು ಬೈಕ್ ರ್‍ಯಾಲಿಗೆ ಚಾಲನೆ ನೀಡಲಿದ್ದಾರೆ. ಹರ್ಸಿಲ್‌ನಲ್ಲಿ ನಡೆಯುವ ಸಾರ್ವಜನಿಕ ಸಮಾರಂಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

ಉತ್ತರಾಖಂಡ ಸರ್ಕಾರ ಈ ವರ್ಷ ಚಳಿಗಾಲದ ಪ್ರವಾಸೋದ್ಯಮ ಕಾರ್ಯಕ್ರಮ ಪ್ರಾರಂಭಿಸಿದೆ. ಸಾವಿರಾರು ಭಕ್ತರು ಈಗಾಗಲೇ ಗಂಗೋತ್ರಿ, ಯಮುನೋತ್ರಿ, ಕೇದಾರನಾಥ ಮತ್ತು ಬದರಿನಾಥದ ಚಳಿಗಾಲದ ಸ್ಥಾನಗಳಿಗೆ ಭೇಟಿ ನೀಡಿದ್ದಾರೆ. ಧಾರ್ಮಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಮತ್ತು ಸ್ಥಳೀಯ ಆರ್ಥಿಕತೆ, ಹೋಂಸ್ಟೇಗಳು, ಪ್ರವಾಸೋದ್ಯಮ ವ್ಯವಹಾರಗಳನ್ನು ಉತ್ತೇಜಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ.

**************

ನಾವೀನ್ಯತೆ, ಒಳಗೊಳ್ಳುವಿಕೆ, ಸುಸ್ಥಿರತೆ ಮತ್ತು ನಂಬಿಕೆ ಇವು ತಂತ್ರಜ್ಞಾನ ಆಡಳಿತದ ಕಡೆಗೆ ಭಾರತದ ಮಾರ್ಗದರ್ಶಿ ತತ್ವಗಳ ತಿರುಳು ಎಂದು ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ.

ಸ್ಪೇನ್‌ನ ಬಾರ್ಸಿಲೋನಾದಲ್ಲಿ ನಡೆದ ಮೊಬೈಲ್ ವರ್ಲ್ಡ್ ಕಾಂಗ್ರೆಸ್‌ನಲ್ಲಿ ಮಾತನಾಡಿದ ಸಿಂಧಿಯಾ, ದೇಶದ ಪ್ರತಿಯೊಬ್ಬ ನಾಗರಿಕರಿಗೂ ಸೇವೆ ಸಲ್ಲಿಸಲು ಆಧಾರ್ ಮತ್ತು ಭಾರತ್‌ನೆಟ್‌ನ ಯಶಸ್ಸನ್ನು ಎತ್ತಿ ತೋರಿಸಿದರು.

ಸ್ಪೆಕ್ಟ್ರಮ್ ನಿರ್ವಹಣೆ, ಮಾರುಕಟ್ಟೆ ಸ್ಥಿರತೆಯನ್ನು ಖಚಿತಪಡಿಸುವುದು, ವಿವಿಧ ಪ್ರಕ್ರಿಯೆಗಳನ್ನು ಸುಲಭಗೊಳಿಸಲು ಟೆಲಿಕಾಂ ನಿಯಂತ್ರಣವನ್ನು ಪರಿಚಯಿಸುವುದು ಮತ್ತು ಗ್ರಾಹಕರ ರಕ್ಷಣೆಗಾಗಿ ಸೈಬರ್ ಭದ್ರತಾ ಕ್ರಮಗಳನ್ನು ತರುವುದು ಮುಂತಾದ ನಿಯಂತ್ರಣದೊಂದಿಗೆ ನಾವೀನ್ಯತೆಯನ್ನು ಸಮತೋಲನಗೊಳಿಸುವ ಭಾರತದ ಪ್ರಯತ್ನಗಳ ನಾಲ್ಕು ಹಂತಗಳ ಬಗ್ಗೆಯೂ ಸಿಂಧಿಯಾ ಮಾತನಾಡಿದರು.

ಮೊಬೈಲ್ ವರ್ಲ್ಡ್ ಕಾಂಗ್ರೆಸ್ 2025 ಭೇಟಿಯ ಸಮಯದಲ್ಲಿ, ಸಿಂಧಿಯಾ ಇಂಡಿಯಾ ಮೊಬೈಲ್ ಕಾಂಗ್ರೆಸ್‌ನ್ನು ಅನಾವರಣಗೊಳಿಸಿದರು. 38 ಭಾರತೀಯ ಟೆಲಿಕಾಂ ಉಪಕರಣ ತಯಾರಕರು ಹಾರ್ಡ್‌ವೇರ್ ಮತ್ತು ಸಾಫ್ಟ್‌ವೇರ್ ಎರಡರಲ್ಲೂ ತಮ್ಮ ಅತ್ಯಾಧುನಿಕ ಉತ್ಪನ್ನಗಳನ್ನು ಪ್ರದರ್ಶಿಸುತ್ತಿದ್ದಾರೆ.

**************

ಪ್ರಧಾನಿ ನರೇಂದ್ರ ಮೋದಿ ಇಂದು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಬಜೆಟ್ ನಂತರದ ಉದ್ಯೋಗ ಕುರಿತ ವೆಬಿನಾರ್‌ನಲ್ಲಿ ಭಾಗವಹಿಸಲಿದ್ದಾರೆ.

ಹೂಡಿಕೆ, ಆರ್ಥಿಕತೆ ಮತ್ತು ನಾವೀನ್ಯತೆಯ ಕುರಿತು ಪ್ರಧಾನಿ, ಈ ವೆಬಿನಾರ್‌ನಲ್ಲಿ ಮಾತನಾಡಲಿದ್ದಾರೆ.

ಉದ್ಯೋಗ ಸೃಷ್ಟಿ ಸರ್ಕಾರದ ಪ್ರಮುಖ ಗಮನ ಕ್ಷೇತ್ರಗಳಲ್ಲಿ ಒಂದಾಗಿದೆ. ಪ್ರಧಾನ ಮಂತ್ರಿಯವರ ದೂರದೃಷ್ಟಿಯಿಂದ ಪ್ರೇರಿತವಾಗಿ, ಸರ್ಕಾರವು ಉದ್ಯೋಗ ಬೆಳವಣಿಗೆಯನ್ನು ಉತ್ತೇಜಿಸಲು ಮತ್ತು ಉದ್ಯೋಗಕ್ಕೆ ಹೆಚ್ಚಿನ ಮಾರ್ಗಗಳನ್ನು ಸೃಷ್ಟಿಸಲು ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ.

ವೆಬಿನಾರ್ ಸರ್ಕಾರ, ಕೈಗಾರಿಕೆ, ಶೈಕ್ಷಣಿಕ ಮತ್ತು ನಾಗರಿಕರ ನಡುವೆ ಸಹಯೋಗವನ್ನು ಬೆಳೆಸುತ್ತದೆ, ಪರಿವರ್ತನಾತ್ಮಕ ಬಜೆಟ್ ಘೋಷಣೆಗಳನ್ನು ಪರಿಣಾಮಕಾರಿ ಅನುಷ್ಠಾನಗೊಳಿಸುವಲ್ಲಿ ಈ ಚರ್ಚೆಗಳನ್ನು ಸಹಕಾರಿಯಾಗಲಿವೆ.

ಈ ಚರ್ಚೆಗಳು ಸುಸ್ಥಿರ ಮತ್ತು ಸಮಗ್ರ ಬೆಳವಣಿಗೆಗೆ ದಾರಿ ಮಾಡಿಕೊಡುವುದು, ತಂತ್ರಜ್ಞಾನ ಮತ್ತು ಇತರ ವಲಯಗಳಲ್ಲಿ ನಾಯಕತ್ವ ಮತ್ತು 2047 ರ ವೇಳೆಗೆ ವಿಕಸಿತ ಭಾರತದ ಗುರಿಯನ್ನು ಸಾಧಿಸುವತ್ತ ಕೆಲಸ ಮಾಡುವ ಕೌಶಲ್ಯಪೂರ್ಣ, ಆರೋಗ್ಯಕರ ಕಾರ್ಯಪಡೆಗೆ ದಾರಿ ಮಾಡಿಕೊಡುವ ಗುರಿಯನ್ನು ಹೊಂದಿವೆ.

**************

ಕ್ಯಾಪ್ಟಿವ್ ಮತ್ತು ವಾಣಿಜ್ಯ ಗಣಿಗಳಿಂದ 2024–25ನೇ ಹಣಕಾಸು ವರ್ಷದಲ್ಲಿ ಒಟ್ಟು ಕಲ್ಲಿದ್ದಲು ಉತ್ಪಾದನೆಯು ಈ ವರ್ಷದ ಫೆಬ್ರವರಿ ವೇಳೆಯ 167 ಮಿಲಿಯನ್ ಟನ್‌ಗಳಿಗಿಂತ ಹೆಚ್ಚಾಗಿದೆ.

ಇದೇ ಅವಧಿಯಲ್ಲಿ 126 ಮಿಲಿಯನ್ ಟನ್‌ಗಳಿಗೆ ಹೋಲಿಸಿದರೆ ಇದು ವರ್ಷದಿಂದ ವರ್ಷಕ್ಕೆ ಶೇಕಡಾ 32 ಕ್ಕಿಂತ ಹೆಚ್ಚಿನ ಏರಿಕೆಯಾಗಿದ್ದು, ಕಲ್ಲಿದ್ದಲು ರವಾನೆಯೂ ಗಮನಾರ್ಹ ಏರಿಕೆ ಕಂಡಿದೆ ಎಂದು ಕಲ್ಲಿದ್ದಲು ಸಚಿವಾಲಯ ತಿಳಿಸಿದೆ.

2024–25ನೇ ಸಾಲಿಗೆ ಒಟ್ಟು ಕಲ್ಲಿದ್ದಲು ರವಾನೆಯು 170 ಮಿಲಿಯನ್ ಟನ್‌ಗಳಿಗಿಂತ ಹೆಚ್ಚು ತಲುಪಿದ್ದು, ಇದು ಹಿಂದಿನ ವರ್ಷದಲ್ಲಿ ದಾಖಲಾದ 128 ಮಿಲಿಯನ್ ಅನ್ನು ಮೀರಿದೆ. ವಿದ್ಯುತ್, ಉಕ್ಕು ಮತ್ತು ಸಿಮೆಂಟ್‌ನಂತಹ ಪ್ರಮುಖ ವಲಯಗಳಿಗೆ ಸ್ಥಿರ ಮತ್ತು ನಿರಂತರ ಕಲ್ಲಿದ್ದಲು ಪೂರೈಕೆಯನ್ನು ಖಚಿತಪಡಿಸುತ್ತಿದೆ ಎಂದು ಸಚಿವಾಲಯ ತಿಳಿಸಿದೆ. ರಾಷ್ಟ್ರೀಯ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಕೊಡುಗೆ ನೀಡುವ ಸುಸ್ಥಿರ ಮತ್ತು ಪರಿಣಾಮಕಾರಿ ಕಲ್ಲಿದ್ದಲು ವಲಯವನ್ನು ಬೆಳೆಸಲು ಸರ್ಕಾರ ಬದ್ಧವಾಗಿದೆ ಎಂದು ಅದು ಹೇಳಿದೆ.

**************

ಏಪ್ರಿಲ್ 2 ರಿಂದ ಪರಸ್ಪರ ಸುಂಕಗಳ ನೀತಿ ಅನುಷ್ಠಾನಗೊಳಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.

ಈ ನಿಲುವು ವ್ಯಾಪಾರ ನೀತಿಯ ಬಗ್ಗೆ ತಮ್ಮ ಆಡಳಿತದ ನಿಲುವನ್ನು ಬಲಪಡಿಸುತ್ತದೆ ಎಂದಿರುವ ಟ್ರಂಪ್, ಐರೋಪ್ಯ ಒಕ್ಕೂಟ, ಚೀನಾ, ಬ್ರೆಜಿಲ್, ಭಾರತ ಮತ್ತು ದಕ್ಷಿಣ ಕೊರಿಯಾ ಹೆಚ್ಚಿನ ಸುಂಕಗಳಿಗಾಗಿ ಟೀಕಿಸಿದ್ದಾರೆ.

ಕಾಂಗ್ರೆಸ್‌ನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಅವರು ತಮ್ಮ ಉದ್ಘಾಟನಾ ಭಾಷಣದಲ್ಲಿ, ನಮಗೆ ಯಾರು ತೆರಿಗೆ ವಿಧಿಸುತ್ತಾರೋ, ನಾವು ಅವರ ಮೇಲೆ ತೆರಿಗೆ ವಿಧಿಸುತ್ತೇವೆ ಎಂದು ಅಮೆರಿಕ ಅಧ್ಯಕ್ಷ ಹೇಳಿದರು.

ಇತರ ದೇಶಗಳು ದಶಕಗಳಿಂದ ನಮ್ಮ ವಿರುದ್ಧ ಸುಂಕಗಳನ್ನು ಬಳಸುತ್ತಿವೆ. ಈಗ ಆ ದೇಶಗಳ ವಿರುದ್ಧ ಸುಂಕ ನೀತಿ ಬಳಸಲು ಪ್ರಾರಂಭಿಸುವ ಸರದಿ ನಮ್ಮದು. ಸರಾಸರಿಯಾಗಿ, ಐರೋಪ್ಯ ಒಕ್ಕೂಟ, ಚೀನಾ, ಬ್ರೆಜಿಲ್, ಭಾರತ, ಮೆಕ್ಸಿಕೊ, ಕೆನಡಾ ಮತ್ತು ಅಸಂಖ್ಯಾತ ಇತರ ರಾಷ್ಟ್ರಗಳು ನಾವು ವಿಧಿಸುವುದಕ್ಕಿಂತ ಹೆಚ್ಚಿನ ಸುಂಕಗಳನ್ನು ನಮಗೆ ವಿಧಿಸುತ್ತವೆ. ಇದು ತೀರ ಅನ್ಯಾಯ ಎಂದು ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ.

**************

ದುಬೈನಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯಲ್ಲಿ ಇಂದು 2ನೇ ಸೆಮಿಫೈನಲ್ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ ಹಾಗೂ ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ 2.30 ಕ್ಕೆ ಆರಂಭವಾಗಲಿದೆ.

ಈ ಪಂದ್ಯದಲ್ಲಿ ಗೆಲ್ಲುವ ತಂಡವು, ಈಗಾಗಲೇ ಫೈನಲ್ ಪ್ರವೇಶಿಸಿರುವ ಭಾರತ ತಂಡದೊಂಡನೆ ಇದೇ 9 ರಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿವೆ.

**************

ಯೋಗ ಪ್ರಚಾರ ಮತ್ತು ಅಭಿವೃದ್ಧಿ ಕ್ಷೇತ್ರದಲ್ಲಿ ಗಮನಾರ್ಹ ಕೊಡುಗೆ ನೀಡುವ ವ್ಯಕ್ತಿಗಳು ಮತ್ತು ಸಂಸ್ಥೆಗಳನ್ನು ಗೌರವಿಸಲು ಆಯುಷ್ ಸಚಿವಾಲಯವು 2025 ರ ಪ್ರಧಾನಮಂತ್ರಿ ಯೋಗ ಪ್ರಶಸ್ತಿಗಳನ್ನು ನೀಡುತ್ತಿದೆ.

ಜೂನ್ 21 ರಂದು ಅಂತರರಾಷ್ಟ್ರೀಯ ಯೋಗ ದಿನದಂದು ಪ್ರಧಾನ ಮಂತ್ರಿ ಯೋಗ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

**************

ಇಂಡಿಯನ್ ಸೂಪರ್ ಲೀಗ್ –ಐಎಸ್‌ಎಲ್ ಫುಟ್ಬಾಲ್‌ನಲ್ಲಿ ಜಮ್ಶೆಡ್‌ಪುರದ ಜೆಆರ್‌ಡಿ ಟಾಟಾ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ಜೆಮ್ಶೆಡ್‌ಪುರ ಎಫ್‌ಸಿ, ಒಡಿಶಾ ವಿರುದ್ಧ ಸೆಣಸಲಿದೆ. ಪಂದ್ಯ ಇಂದು ರಾತ್ರಿ 7:30 ಕ್ಕೆ ಪ್ರಾರಂಭವಾಗಲಿದೆ.

ಗೋವಾದ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಇಂಡಿಯನ್ ಸೂಪರ್ ಲೀಗ್ – ಐಎಸ್‌ಎಲ್ ಫುಟ್ಬಾಲ್ ಪಂದ್ಯದಲ್ಲಿ ಗೋವಾ ತಂಡವು ಮೊಹಮ್ಮದನ್ ಎಸ್‌ಸಿ ವಿರುದ್ಧ 2–0 ಅಂತರದ ಗೆಲುವು ದಾಖಲಿಸಿತು.

ಈ ಗೆಲುವಿನೊಂದಿಗೆ ಗೋವಾ ತಂಡವು ಎರಡನೇ ಸ್ಥಾನ ಖಚಿತಪಡಿಸಿಕೊಂಡಿದೆ. ಮೋಹನ್ ಬಗಾನ್ ಸೂಪರ್ ಜೈಂಟ್ ಜೊತೆ ತಂಡ ಈಗಾಗಲೇ ಸೆಮಿಫೈನಲ್‌ಗೆ ಅರ್ಹತೆ ಪಡೆದಿದೆ.

**************

ಜಾರ್ಖಂಡ್‌ನ ಪಶ್ಚಿಮ ಸಿಂಗ್‌ಭೂಮ್ ಜಿಲ್ಲೆಯ ಬಲಿಬಾ ಅರಣ್ಯ ಪ್ರದೇಶದಲ್ಲಿ ಇಂದು ಸಂಭವಿಸಿದ ಐಇಡಿ ಸ್ಫೋಟದಲ್ಲಿ ಮೂವರು ಸಿಆರ್‌ಪಿಎಫ್ ಯೋಧರು ತೀವ್ರವಾಗಿ ಗಾಯಗೊಂಡಿದ್ದಾರೆ.

ಮೂವರನ್ನೂ ರಕ್ಷಿಸಿ ಪ್ರಾಥಮಿಕ ವೈದ್ಯಕೀಯ ಚಿಕಿತ್ಸೆಗಾಗಿ ಕರೆತರಲಾಗಿತ್ತು. ಗಾಯಗೊಂಡ ಮೂವರು ಯೋಧರನ್ನು ಉತ್ತಮ ವೈದ್ಯಕೀಯ ಚಿಕಿತ್ಸೆಗಾಗಿ ರಾಂಚಿಗೆ ವಿಮಾನದ ಮೂಲಕ ಕರೆತರಲಾಗಿದೆ. ಇಂದು ಬೆಳಿಗ್ಗೆಯಿಂದ ಪಡೆಗಳು ಶೋಧ ಕಾರ್ಯಾಚರಣೆ ಮುಂದುವರೆದಿದೆ ಎಂದು ಎಸ್.ಪಿ.ಅಶುತೋಷ್ ಶೇಖರ್ ತಿಳಿಸಿದ್ದಾರೆ.

**************

ಕೇಂದ್ರ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಇದೇ ತಿಂಗಳ 7 ರಂದು ರಷ್ಯಾಕ್ಕೆ ಭೇಟಿ ನೀಡಲಿದ್ದಾರೆ.

ಭಾರತ ಮತ್ತು ರಷ್ಯಾಕ್ಕೆ ಸಂಬಂಧ ಪಟ್ಟಂತೆ ಪ್ರಮುಖ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಲಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

ಮಿಶ್ರಿ ತಮ್ಮ ಭೇಟಿಯ ಸಮಯದಲ್ಲಿ ರಷ್ಯಾದ ಉನ್ನತ ಮಟ್ಟದ ಅಧಿಕಾರಿಗಳನ್ನು ಭೇಟಿ ಮಾಡುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ.

ವ್ಯಾಪಾರ ಮತ್ತು ಹೂಡಿಕೆಯನ್ನು ವಿಸ್ತರಿಸುವುದು, ವಿಶೇಷವಾಗಿ ದ್ವಿಮುಖ ವ್ಯಾಪಾರವನ್ನು ಹೆಚ್ಚು ಸಮತೋಲನಗೊಳಿಸಲು, ಭಾರತೀಯ ರಫ್ತುಗಳನ್ನು ಹೆಚ್ಚಿಸುವುದು ಮತ್ತು ಪಾಶ್ಚಿಮಾತ್ಯ ನಿರ್ಬಂಧಗಳ ಹಿನ್ನೆಲೆಯಲ್ಲಿ ಭಾರತಕ್ಕೆ ರಷ್ಯಾದ ಇಂಧನ ಪೂರೈಕೆಯನ್ನು ನಿರ್ವಹಿಸುವುದು ಸೇರಿದಂತೆ ಇನ್ನು ಅನೇಕ ವಿಷಯಗಳು ರಷ್ಯಾದಲ್ಲಿ ನಡೆಯಲಿರುವ ವಿದೇಶಾಂಗ ಕಾರ್ಯದರ್ಶಿಗಳ ಸಭೆಯಲ್ಲಿ ಪರಿಗಣಿಸಲಾಗುವ ವಿಷಯಗಳಲ್ಲಿ ಸೇರಿವೆ ಎಂದು ಅವರು ಹೇಳಿದ್ದಾರೆ.

**************

ಆಸ್ಟ್ರೇಲಿಯಾದ ಸ್ಟಾರ್ ಬ್ಯಾಟ್ಸ್‌ಮನ್ ಸ್ಟೀವ್ ಸ್ಮಿತ್ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. 14 ವರ್ಷಗಳ ಏಕದಿನ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಅವರು, ಟೆಸ್ಟ್ ಮತ್ತು ಟಿ–20 ಪಂದ್ಯಗಳಿಗೆ ಆಡಲಿದ್ದಾರೆ.

*******ಮುಕ್ತಾಯ*******